ಉದಯವಾಣಿ
ಕನ್ನಡ ದಿನಪತ್ರಿಕೆ

# ವಿಐಇ-2014 ಇಂದಿನಿಂದ

**ಬೆಂಗಳೂರು:** ಜೈನ್ ವಿಶ್ವವಿದ್ಯಾಲಯದ ರಾಷ್ಟ್ರೀಯ ವಾರ್ಷಿಕ ಕ್ರೀಡಾಕೂಟವಾದ 'ವಿಐಇ-2014' ಫೆ.16ರಿಂದ 19ರವರೆಗೆ ನಗರದ ವಿವಿಧ ಕ್ರೀಡಾಂಗಣಗಳಲ್ಲಿ ನಡೆಯಲಿದೆ.

ದೇಶದ ವಿವಿಧ ಕಾಲೇಜು ಹಾಗೂ ವಿಶ್ವವಿದ್ಯಾಲಯದ ಸಾವಿರಕ್ಕೂ ಅಧಿಕ ಕ್ರೀಡಾಪಟುಗಳು ಟೂರ್ನಿಯಲ್ಲಿ ಪಾಲ್ಗೊಳ್ಳಲಿದ್ದು, ಕ್ರಿಕೆಟ್, ಬ್ಯಾಡ್ಮಿಂಟನ್, ಬಾಸ್ಕೆಟ್‌ಬಾಲ್, ಹಾಕಿ, ಈಜು, ಟೇಬಲ್ ಟೆನಿಸ್, ಟೆನಿಸ್ ಮತ್ತು ವಾಲಿಬಾಲ್ ಟೂರ್ನಿ ನಡೆಯಲಿವೆ. ಭಾನುವಾರ ಜಯನಗರ ಮಾಧವನ್ ಪಾರ್ಕ್ ನಲ್ಲಿ ಉದ್ಘಾಟನಾ ಕಾರ್ಯಕ್ರಮ ನಡೆಯಲಿದೆ.